ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

35

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ ಆಯೋಗ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ          ದಿನಾಂಕ : DATE : 26/3/21

# ಮೇ ತಿಂಗಳಲ್ಲಿ ಚುನಾವಣೆ ಇಲ್ಲ?

## I ಜಿಪಂ, ತಾಪಂ ಸದಸ್ಯ ಸ್ಥಾನ ನಿಗದಿ

• ರಫೀಕ್ ಅಹ್ಮದ್

ಬೆಂಗಳೂರು: ಚುನಾವಣೆಗಳನ್ನು ಮುಂದೂಡುವುದಿಲ್ಲ ಎಂದು ಸರ್ಕಾರ ಹೇಳುತ್ತಿದ್ದರೆ, ನಿಗದಿತ ಅವಧಿಯೊಳಗೆ ಚುನಾವಣೆ ನಡೆಸಿಯೇ ಸಿದ್ಧ ಎಂದು ರಾಜ್ಯ ಚುನಾವಣಾ ಆಯೋಗ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಆದರೆ, ಕ್ಷೇತ್ರ ಮರುವಿಂಗಡಣೆ, ಮೀಸಲಾತಿಗೆ ಸಂಬಂಧಿಸಿದ ಸದ್ಯದ ಬೆಳವಣಿಗೆಗಳನ್ನು ಗಮನಿಸಿದರೆ ಜಿಪಂ ಹಾಗೂ ತಾಪಂ ಸಾರ್ವತ್ರಿಕ ಚುನಾವಣೆಗಳು ಮೇ ತಿಂಗಳಲ್ಲಿ ನಡೆಯುವುದು ಅನುಮಾನ.

ಜಿಪಂ, ತಾಪಂಗಳಿಗೆ ಸದಸ್ಯ ಸ್ಥಾನಗಳ ಸಂಖ್ಯೆಯನ್ನು ನಿಗದಿಪಡಿಸಿ ಚುನಾವಣಾ ಆಯೋಗ ಮಾ.24ರಂದು ಅಧಿಸೂಚನೆ ಹೊರಡಿಸಿದೆ. ಇದರ ನಂತರದ ಪ್ರಕ್ರಿಯೆ ನಿಗದಿಯಾದ ಸದಸ್ಯ ಸ್ಥಾನಗಳಿಗೆ ಭೌಗೋಳಿಕ ಪ್ರದೇಶವನ್ನು ಗುರುತಿಸಬೇಕು. ಇದಕ್ಕೆ ಕನಿಷ್ಠ ವಾರ ಬೇಕು. ಅದಾದ ಬಳಿಕ ಮೀಸಲಾತಿ ಕರಡು ಅಧಿಸೂಚನೆ ಹೊರಡಿಸಬೇಕು. ಕರಡು ಮೀಸಲು ಅಧಿಸೂಚನೆ ಬಗ್ಗೆ ಸಾರ್ವಜನಿಕರು ಆಕ್ಷೇಪಣೆ ಸಲ್ಲಿಸಲು ಒಂದು ವಾರ ಸಮಯಾವಕಾಶ ನೀಡಬೇಕು. ಅಂತಿಮ ಮೀಸಲು ಅಧಿಸೂಚನೆ ಹೊರಡಿಸಿದ 45 ದಿನಗಳ ಬಳಿಕ ಚುನಾವಣಾ ವೇಳಾಪಟ್ಟಿ ಪ್ರಕಟಿಸಬೇಕು.

ಎಲ್ಲವೂ ಅಂದುಕೊಂಡಂತೆ ನಡೆದು ಕ್ಷೇತ್ರಗಳಿಗೆ ಭೌಗೋಳಿಕ ಪ್ರದೇಶಗಳನ್ನು ಗುರುತಿಸುವ ಪ್ರಕ್ರಿಯೆ ಪೂರ್ಣಗೊಳಿಸಲು ಏಪ್ರಿಲ್ ಮೊದಲ ವಾರ ಆಗುತ್ತದೆ. ಎರಡನೇ ವಾರದಲ್ಲಿ ಮೀಸಲು ಕರಡು ಅಧಿಸೂಚನೆ ಹೊರಡಿಸಬೇಕಾಗುತ್ತದೆ. ಆಕ್ಷೇಪಣೆಗಳಿಗೆ ಕಾಲಾವಕಾಶ ಕೊಟ್ಟು ಯಾವುದೇ ಕಾನೂನು ಅಡಚಣೆಗಳು ಎದುರಾಗದಿದ್ದರೆ ಅಂತಿಮ ಮೀಸಲು ಅಧಿಸೂಚನೆ 3ನೇ ವಾರದಲ್ಲಿ ಹೊರಬೀಳಬಹುದು. ▶ 7ನೇ ಪುಟಕ್ಕೆ



> **ಮೀಸಲಾತಿ ನಿಯಮಗಳಲ್ಲಿನ ಕೆಲವು ನ್ಯೂನತೆಗಳನ್ನು ಸರಿಪಡಿಸಲು ವಿಧಾನಸಭೆ ಸ್ಪೀಕರ್ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗಿದೆ. ಹೊಸ ನಿಯಮ ಅಳವಡಿಸಿಕೊಳ್ಳುವಂತೆ ಸೂಚಿಸಲಾಗಿದೆ.**
> • ಕೆ.ಎಸ್. ಈಶ್ವರಪ್ಪ, ಸಚಿವ

> **ಮೇನಲ್ಲಿ ಚುನಾವಣೆ ಮಾಡುವ ಉದ್ದೇಶದಿಂದಲೇ ಆಯೋಗ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಆದಕ್ಕಾಗಿಯೇ ಸ್ಪೀಕರ್ ನೇತೃತ್ವದಲ್ಲಿ ಸಭೆ ನಡೆಸಲಾಗಿದೆ.**
> • ಡಾ. ಬಿ. ಬಸವರಾಜು, ರಾಜ್ಯ ಚುನಾವಣಾ ಆಯುಕ್ತ

## ಜಿಪಂ, ತಾಪಂ ಕ್ಷೇತ್ರಗಳ ನಿಗದಿ

ಸಾರ್ವತ್ರಿಕ ಚುನಾವಣೆ ನಡೆಯಲಿರುವ ಜಿ.ಪಂ ಹಾಗೂ ತಾಪಂಗಳಿಗೆ ಸದಸ್ಯ ಸ್ಥಾನಗಳು (ಕ್ಷೇತ್ರಗಳು) ನಿಗದಿಪಡಿಸಿ ರಾಜ್ಯ ಚುನಾವಣಾ ಆಯೋಗ ಮಾ.24ರಂದು ಅಧಿಸೂಚನೆ ಹೊರಡಿಸಿದೆ. ಅದರಂತೆ, 2021ಕ್ಕೆ 1,191 ಜಿಪಂ ಹಾಗೂ 3,285 ತಾಪಂ ಸದಸ್ಯ ಸ್ಥಾನಗಳನ್ನು ನಿಗದಿಪಡಿಸಲಾಗಿದೆ. 2016ರಲ್ಲಿ ಜಿಪಂ 1,083 ಹಾಗೂ 3,903 ತಾ.ಪಂ ಕ್ಷೇತ್ರಗಳಿದ್ದವು. ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ 108 ಜಿ.ಪಂ

ಈ ಹಿಂದೆ ಪ್ರತಿ 40 ಸಾವಿರ ಜನಸಂಖ್ಯೆಗೆ ಒಂದು ಜಿಪಂ ಹಾಗೂ ಪ್ರತಿ 10 ಸಾವಿರ ಜನಸಂಖ್ಯೆಗೆ ಒಂದು ತಾಪಂ ಕ್ಷೇತ್ರ ರಚಿಸಲಾಗುತ್ತಿತ್ತು. ಆದರೆ, ಪಂಚಾಯತ್ ರಾಜ್ ಕಾಯ್ದೆ ತಿದ್ದುಪಡಿಯಂತೆ 35 ಸಾವಿರಕ್ಕೆ ಒಂದು ಜಿಪಂ ಕ್ಷೇತ್ರ ಇರಬೇಕು. ಆದ್ದರಿಂದ ಜಿಪಂ ಕ್ಷೇತ್ರಗಳ ಸಂಖ್ಯೆ ಹೆಚ್ಚಾಗಿದೆ. ಅದೇ ರೀತಿ 12,500 ಜನಸಂಖ್ಯೆಗೆ ಒಂದು ತಾಪಂ ಕ್ಷೇತ್ರ ಇರಬೇಕು. ಹಾಗಾಗಿ, ತಾಪಂ ಕ್ಷೇತ್ರಗಳ ಸಂಖ್ಯೆ ಕಡಿಮೆ ಆಗಿದೆ ಎಂದು ರಾಜ್ಯ ಚುನಾವಣಾ

## ಮೇ ತಿಂಗಳಲ್ಲಿ ಚುನಾವಣೆ ಇಲ್ಲ?

1ನೇ ಪುಟದಿಂದ ▶ ಅದಾದ 45 ದಿನಗಳ ನಂತರ ಚುನಾವಣೆ ಅಧಿಸೂಚನೆ ಹೊರಡಿಸಬೇಕು. ಅಂದರೆ, ಚುನಾವಣೆ ವೇಳಾಪಟ್ಟಿ ಪ್ರಕಟಿಸುವುದಕ್ಕೆಯೇ ಮೇ ತಿಂಗಳ ಕೊನೆ ಆಗಬಹುದು.

ಈ ಮಧ್ಯೆ ಮೀಸಲಾತಿ ನಿಯಮಗಳಲ್ಲಿನ ಕೆಲವು ನ್ಯೂನ್ಯತೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿಯವರ ಅಧ್ಯಕ್ಷತೆಯಲ್ಲಿ ಚುನಾವಣಾ ಆಯೋಗ, ಸರ್ಕಾರ ಹಾಗೂ ಪ್ರತಿಪಕ್ಷಗಳ ಪ್ರಮುಖರ ಸಭೆ ಬುಧವಾರ (ಮಾ.24) ನಡೆದಿದೆ. ಹೊಸ ಮೀಸಲಾತಿ ನಿಯಮಗಳನ್ನು ಆಯೋಗಕ್ಕೆ ಸಲ್ಲಿಸಲಾಗಿದೆ. ಅವನ್ನು ಅಳವಡಿಸಿಕೊಂಡು ಮೀಸಲಾತಿ ಪ್ರಕ್ರಿಯೆ ಕೈಗೊಳ್ಳುವ ಅನಿವಾರ್ಯತೆ ಚುನಾವಣಾ ಆಯೋಗದ ಮುಂದಿದೆ. ಮೇ-ಜೂನ್ ತಿಂಗಳಲ್ಲಿ ಜಿ.ಪಂ, ತಾ.ಪಂ ಗಳ ಅವಧಿ ಮುಗಿಯಲಿದ್ದು ಅದಕ್ಕಾಗಿ ಮೇ ತಿಂಗಳಲ್ಲಿ ಚುನಾವಣೆ ನಡೆಯಲೇಬೇಕಿದೆ. ಆದರೆ, ಸದ್ಯದ ಪರಿಸ್ಥಿತಿ ಗಮನಿಸಿದರೆ ಇದು ಸಾಧ್ಯವೇ ಎಂಬ ಪ್ರಶ್ನೆ ಮೂಡುತ್ತಿದೆ.

ವಿಧಾನಸಭಾಧ್ಯಕ್ಷ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕಾನೂನು ಸಚಿವ ಬಸವರಾಜ ಬೊಮ್ಮಾಯಿ, ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್. ಈಶ್ವರಪ್ಪ, ರಾಜ್ಯ ಚುನಾವಣಾ ಆಯುಕ್ತ ಡಾ. ಬಿ. ಬಸವರಾಜು, ಕಾಂಗ್ರೆಸ್ ಪಕ್ಷದ ಡಾ. ಅಜಯ್ ಸಿಂಗ್, ಜೆಡಿಎಸ್‌ನ ಎಚ್.ಡಿ. ರೇವಣ್ಣ ಎ.ಟಿ. ರಾಮಸ್ವಾಮಿ ಸೇರಿದಂತೆ ಗ್ರಾಮೀಣಾಭಿವೃದ್ಧಿ ಇಲಾಖೆ ಮತ್ತು ಚುನಾವಣಾ ಆಯೋಗದ ಅಧಿಕಾರಿಗಳು ಪಾಲ್ಗೊಂಡಿದ್ದರು.